# ಬಿಜೆಪಿ ಶಾಸಕರಿಗೆ ವಿಪ್ ಜಾರಿ

## ಸಮರ್ಥವಾಗಿ ಸದನ ಎದುರಿಸಲು ಸಜ್ಜಾಗಿ ಎಂದ ಸಿಎಂ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸದನದಲ್ಲಿ ಎಲ್ಲ ಸಚಿವರು ಮತ್ತು ಶಾಸಕರು ಕಡ್ಡಾಯವಾಗಿ ಹಾಜರಿದ್ದು, ಎಲ್ಲ ಹಂತದಲ್ಲಿ ಸಾಥ್ ನೀಡಬೇಕು. ಪ್ರತಿಪಕ್ಷಗಳು ಏನೇ ದಾಳಿ ಮಾಡಿದರೂ ಅದನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ಎಲ್ಲರೂ ಸಜ್ಜಾಗಿರಬೇಕು ಎಂದು ಸಿಎಂ ಬಿ.ಎಸ್. ಯಡಿಯೂರಪ್ಪ ತಾಕೀತು ಮಾಡಿದ್ದಾರೆ.

ಭಾನುವಾರ ನಡೆದ ಬಿಜೆಪಿ ಶಾಸಕಾಂಗ ಸಭೆಯಲ್ಲಿ ಹಲವು ಸೂಚನೆಗಳನ್ನು ನೀಡಲಾಗಿದ್ದು, ಸದನ ನಡೆಯುವ ಸಂದರ್ಭದಲ್ಲಿ ಸಚಿವರು ಪ್ರವಾಸ ಹಮ್ಮಿಕೊಳ್ಳಬಾರದು ಎಂದು ಮೌಖಿಕವಾಗಿ ಸೂಚಿಸಲಾಗಿದೆ. ಎಲ್ಲರೂ ಒಟ್ಟಾಗಿರಬೇಕು, ಯಾವುದೇ ಭಿನ್ನಾಭಿಪ್ರಾಯಕ್ಕೆ ಅವಕಾಶ ಮಾಡಿಕೊಡಬಾರದು. ಈ ಬಾರಿಯ ಬಜೆಟ್ ಸ್ವಲ್ಪ ಕಠಿಣವಾಗಿರಲಿದೆ ಎಂಬ ಸೂಚನೆ ಸಹ ನೀಡಲಾಗಿದೆ. ಫೆ.27ರ ಸಿಎಂ ಹುಟ್ಟುಹಬ್ಬಕ್ಕೆ ಪಕ್ಷದ ಎಲ್ಲ ಶಾಸಕರೂ ಭಾಗವಹಿಸಬೇಕು. ಕೇಂದ್ರದಿಂದ ರಾಜನಾಥ್ ಸಿಂಗ್, ನಿರ್ಮಲಾ ಸೀತಾರಾಮನ್ ಬರುತ್ತಾರೆ ಎಂದು ತಿಳಿಸಲಾಗಿದೆ.

**ವಿಪ್ ಜಾರಿ:** ಜಂಟಿ ಅಧಿವೇಶನಕ್ಕೆ ಕಡ್ಡಾಯ ಹಾಜರಾಗುವಂತೆ ವಿಪ್ ಜಾರಿ ಮಾಡಲಾಗಿದೆ. ಆಡಳಿತ ಪಕ್ಷದ ಮುಖ್ಯ ಸಚೇತಕ ಸುನೀಲ್ ಕುಮಾರ್ ವಿಪ್ ಜಾರಿ ಮಾಡಿದ್ದು, ವಿಧಾನ ಪರಿಷತ್ ಉಪ ಚುನಾವಣೆಯಲ್ಲಿ ಎಲ್ಲ ಶಾಸಕರೂ ಕಡ್ಡಾಯ ಭಾಗವಹಿಸಿ ಮತದಾನ ಮಾಡಬೇಕು ಎಂದು ತಿಳಿಸಲಾಗಿದೆ.

ಸೋಮವಾರ ಬೆಳಗ್ಗೆ ಎಲ್ಲ ಶಾಸಕರು 8.30ಕ್ಕೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸೇರಬೇಕು. ಉಪಾಹಾರದ ನಂತರ ಎಲ್ಲರೂ ಒಟ್ಟಾಗಿ ತೆರಳಿ ಡಿಸಿಎಂ ಲಕ್ಷ್ಮಣ ಸವದಿ ಪರ ಮತ ಚಲಾಯಿಸಬೇಕು ಎಂದು ತಿಳಿಸಲಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್, ಉಪಮುಖ್ಯಮಂತ್ರಿಗಳು, ಸಚಿವರು ಸಭೆಯಲ್ಲಿದ್ದರು. ಬಸನಗೌಡ ಪಾಟೀಲ್ ಯತ್ನಾಳ್, ರಾಜುಗೌಡ, ಉಮೇಶ್ ಕತ್ತಿ, ಶ್ರೀರಾಮುಲು, ಕೆ.ಎಸ್. ಈಶ್ವರಪ್ಪ ಗೈರಾಗಿದ್ದರು.

### ಸಭೆಯಲ್ಲಿ ಶಾಸಕರ ಒತ್ತಾಯ

**ಸಂಪುಟದ ಎಲ್ಲ ಸಚಿವರು ಪಕ್ಷದ ಶಾಸಕರ ಕೆಲಸ ಮಾಡಿಕೊಡುವಂತೆ ಸೂಚನೆ ನೀಡಬೇಕು ಎಂದು ಕೆಲ ಶಾಸಕರು ಶಾಸಕಾಂಗ ಪಕ್ಷದ ಸಭೆಯಲ್ಲಿ ಸಿಎಂ ಗಮನಕ್ಕೆ ತಂದರು. ಎಲ್ಲ ಸಚಿವರೂ ನಮ್ಮ ಕೈಗೆ ಸಿಗುತ್ತಿಲ್ಲ. ನಮಗೂ ಸಮಯ ಕೊಡಬೇಕು, ನಮ್ಮ ಕೆಲಸ ಮಾಡಿಕೊಡಬೇಕು ಎಂದು ಶಾಸಕರು ಒತ್ತಾಯಿಸಿದರೆನ್ನಲಾಗಿದೆ.**